## ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಸೇಡಂ.

ಸಿ.ಸಿ. ನಂಃ 386/2020 ಸಿಡಬ್ಲ್ಯೂ: 3 ಪಿಡಬ್ಲ್ಯೂ: 3

ಪ್ರಮಾಣವಚನ ಬೋಧಿಸಲಾಯಿತು ದಿಃ 28-01-2026

ಹೆಸರು : ಮೊಹಮ್ಮದ್ ರಫೀಕ್

ತಂದೆ ಹೆಸರು : ಮೊಹಮ್ಮದ್ ರಹಿಂ

ವಯಸ್ಸು : 39 ವರ್ಷ

ಉದ್ಯೋಗ : ಚಾಲಕ

ವಾಸಸ್ಥಳ : ದೊಡ್ಡ ಅಗಸಿ, ಸೇಡಂ

**:ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ:**

ಚಾಸಾ 1 ಮತ್ತು 2 ನನಗೆ ಗೊತ್ತು. ನ್ಯಾಯಾಲಯದ ಮುಂದೆ ಇರುವ ಆರೋಪಿತರು ನನಗೆ ಗೊತ್ತು.

ಪೋಲೀಸರು ನಮ್ಮ ಸಮಕ್ಷಮ ಯಾವುದೇ ರೀತಿಯ ಪಂಚನಾಮೆಗಳು ಮಾಡಿರುವುದಿಲ್ಲ. ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿ ಸದರಿ ದಾಖಲಾತಿಯು ಗುನ್ನೆ ಸ್ಥಳದ ಪಂಚನಾಮೆ ಆಗಿದ್ದು, ಸಾಕ್ಷಿಯು ಸದರಿ ದಾಖಲಾತಿ ನೋಡಿ ಗುರುತಿಸಿರುವುದರಿಂದ ಅದನ್ನು ನಿಪಿ-2 ಎಂದು ಗುರುತಿಸಲಾಗಿದೆ ಹಾಗು ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು. ಪೊಲೀಸರು ಚಾ ಸಾ 1 ಮತ್ತು ಆರೋಪಿತರ ನಡುವೆ ಜಗಳ ಆಗಿರುವುದರಿಂದ ನನ್ನ ಸಹಿಯನ್ನು ಪಡೆದಿರುತ್ತಾರೆ.

**(ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲಿಗೆ ಅನುಮತಿ ಕೋರಿರುತ್ತಾರೆ, ಅನುಮತಿ ನೀಡಲಾಯಿತು)**

**ಪಾಟೀಸವಾಲುಃ** ಮಾನ್ಯ ಸ.ಸ.ಅ ರವರಿಂದ:

ದಿಃ23-04-2020 ರಂದು ಮಧ್ಯಾಹ್ನ 03-30 ಗಂಟೆಯಿಂದ 04.30 ಗಂಟೆಯವರೆಗೆ ಚಾಸಾ 7 ರವರು ಚಾ ಸಾ 1 ರವರು ತೋರಿಸಿದ ಗುನ್ನೆ ಸ್ಥಳದಲ್ಲಿ ಪೋಲೀಸರು ನನ್ನ ಹಾಗು ಚಾಸಾ 2 ರವರ ಸಮಕ್ಷಮ ಪಂಚನಾಮೆ ಮಾಡಿರುತ್ತಾರೆ ಎಂದರೆ ಗೊತ್ತಿಲ್ಲ. ಪಂಚನಾಮೆಯ ಕಾಲಕ್ಕೆ ಒಂದು ಹಿಡಿ

ಗಾತ್ರದ ಕಲ್ಲನ್ನು ವಶಪಡಿಸಿಕೊಂಡಿರುತ್ತಾರೆ ಎಂದರೆ ಗೊತ್ತಿಲ್ಲ. ನಿಪಿ-2 ರಲ್ಲಿರುವ ವಿಷಯಗಳು ಗೊತ್ತಿದ್ದರು ಸಹ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಕಲ್ಲನ್ನು ನೋಡಿ ಗುರುತಿಸಲು ನಿರಾಕರಿಸಿರುತ್ತಾರೆ ಅದನ್ನು ಈಗಾಗಲೆ ಮು ಮಾ 1 ಎಂದು ಗುರುತಿಸಲಾಗಿದೆ.

**ಪಾಟೀಸವಾಲುಃ** ಆರೋಪಿ ಪರ ವಕೀಲರಿಂದ: ವಕೀಲರು ಪಾಟೀಸವಾಲು ಇರುವುದಿಲ್ಲವೆಂದು ತಿಳಿಸಿರುತ್ತಾರೆ.

ಮರುವಿಚಾರಣೆಃ ಇಲ್ಲ

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ. ಹೇ. ಕೇ. ಸರಿ. ಇದೆ.**

**ಪ್ರ. ದ. ನ್ಯಾ. ದಂ. ಸೇಡಂ.**